# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಮಾನ್ಯ ಸದಸ್ಯರ ಹೆಸರು | ಶ್ರೀ ನಸೀರ್ ಅಹ್ಮದ್ |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 2130 |
| ಉತ್ತರಿಸುವ ದಿನಾಂಕ | 25-03-2021 |
| ಉತ್ತರಿಸುವ ಸಚಿವರು | ಮಾನ್ಯ ಮುಖ್ಯಮಂತ್ರಿಗಳು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ). | ಕರ್ನಾಟಕ ಸರ್ಕಾರ ಸಚಿವಾಲಯದಲ್ಲಿ ಗ್ರೂಪ್-ಡಿ ಹುದ್ದೆಯಿಂದ ಗ್ರೂಪ್-ಸಿ ಹುದ್ದೆಯ ಮುಂಬಡ್ತಿಗೆ ನಿಗದಿಪಡಿಸಿರುವ ವಿದ್ಯಾರ್ಹತೆ ಏನು; | ಕರ್ನಾಟಕ ಸಿವಿಲ್ ಸೇವಾ (ಲಿಪಿಕ ಹುದ್ದೆಗಳ ನೇಮಕಾತಿ) ನಿಯಮಗಳು, 1978ರ, ನಿಯಮ 4ರ ಉಪನಿಯಮ (1)(ii) ರಲ್ಲಿ ಕಿರಿಯ ಸಹಾಯಕ ಹುದ್ದೆಯ ಮುಂಬಡ್ತಿಗೆ ನಿಗದಿಪಡಿಸಿದ್ದ ಪ್ರೌಢ ಶಿಕ್ಷಣ ವ್ಯಾಸಂಗ (ಎಸ್.ಎಸ್.ಎಲ್.ಸಿ.) ಅಥವಾ ತತ್ಸಮಾನ ವಿದ್ಯಾರ್ಹತೆಯ ಬದಲಾಗಿ ಪದವಿ ಪೂರ್ವ ಶಿಕ್ಷಣ ಪರೀಕ್ಷೆ ಅಥವಾ ತತ್ಸಮಾನ ವಿದ್ಯಾರ್ಹತೆ ಎಂದು ಸರ್ಕಾರದ ಅಧಿಸೂಚನೆ ಸಂಖ್ಯೆ:ಸಿಆಸುಇ 18 ಸೇವನೆ 2013 ದಿನಾಂಕ: 13-12-2013ರಲ್ಲಿ ಪ್ರತಿಸ್ಥಾಪಿಸಲಾಗಿರುವುದರಿಂದ **ಕರ್ನಾಟಕ ಸರ್ಕಾರ ಸಚಿವಾಲಯದಲ್ಲಿ ಗ್ರೂಪ್-ಡಿ ಹುದ್ದೆಯಿಂದ ಗ್ರೂಪ್-ಸಿ ಹುದ್ದೆಯಾದ ಕಿರಿಯ ಸಹಾಯಕ ಹುದ್ದೆಯ ಮುಂಬಡ್ತಿಗೆ ಪಿ.ಯು.ಸಿ. ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ನಿಗದಿಪಡಿಸಲಾಗಿದೆ.** |
| ಆ) | ಯಾವ ಯಾವ ವಿದ್ಯಾರ್ಹತೆಗಳು ಪಿಯುಸಿ ತತ್ಸಮಾನ ವಿದ್ಯಾರ್ಹತೆಗೆ ಸಮಾನಾಂತರಾಗಿವೆ; (ವಿವರ ನೀಡುವುದು) | ಪಿಯುಸಿ ವಿದ್ಯಾರ್ಹತೆಯ ತತ್ಸಮಾನ ವಿದ್ಯಾರ್ಹತೆಗಳು ಈ ಕೆಳಕಂಡಂತಿವೆ:<br>1) ಸಿ.ಬಿ.ಎಸ್.ಇ ಮತ್ತು ಐ.ಎಸ್.ಸಿ. ಮಂಡಳಿಯು ನಡೆಸುವ ಕ್ಲಾಸ್ 12 ಪರೀಕ್ಷೆ<br>2) ಇತರೆ ರಾಜ್ಯ ಸರ್ಕಾರದ ಪರೀಕ್ಷಾ ಮಂಡಳಿಗಳಿಂದ ನಡೆಸುವ ಕ್ಲಾಸ್ 12 ಪರೀಕ್ಷೆ<br>3) ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಓಪನ್ ಸ್ಕೂಲಿಂಗ್ (ಎನ್.ಐ.ಓ.ಎಸ್.) ವತಿಯಿಂದ ನಡೆಸುವ ಉನ್ನತ ಪ್ರೌಢ ಶಿಕ್ಷಣ ಕೋರ್ಸ್ /ಹೆಚ್.ಎಸ್.ಸಿ.<br>4) ಮೂರು ವರ್ಷಗಳ ಡಿಪ್ಲೊಮಾ ಅಥವಾ ಎರಡು ವರ್ಷಗಳ ಐ.ಟಿ.ಐ. ಕೋರ್ಸ್ ಅಥವಾ ಎರಡು ವರ್ಷಗಳ ವೃತ್ತಿ ಶಿಕ್ಷಣ ಡಿಪ್ಲೊಮಾ (ಜೆ.ಓ.ಸಿ./ಜೆ.ಓ.ಡಿ.ಸಿ/ಜೆ.ಎಲ್.ಡಿ.ಸಿ) ಅಭ್ಯರ್ಥಿಗಳು ಎನ್.ಐ.ಓ.ಎಸ್.ನ ವತಿಯಿಂದ ನಡೆಸುವ ಒಂದು ಭಾಷಾ ಕೋರ್ಸ್ ಮತ್ತು ಒಂದು ಶೈಕ್ಷಣಿಕ ವಿಷಯದಲ್ಲಿ (ದೂರಕಲಿಕೆ ಮಾದರಿಯಲ್ಲಿ) ಅಥವಾ ಪದವಿ ಪೂರ್ವ ಮಂಡಳಿಯು ನಡೆಸುವ ಪರೀಕ್ಷೆಯಲ್ಲಿ ಒಂದು ಭಾಷೆ ಮತ್ತು ಒಂದು ವಿಷಯದಲ್ಲಿ ಉತ್ತೀರ್ಣರಾದಲ್ಲಿ ಮಾತ್ರ ಪಿ.ಯು.ಸಿ.ಗೆ ತತ್ಸಮಾನವೆಂದು ಪರಿಗಣಿಸಬಹುದು. |

| | | |
|---|---|---|
| ಇ) | Karnataka State Open University ಯವರ "Degree Bridge Course (Equivalent to 12th) Arts" ಎಂಬ ಕೋರ್ಸ್‌ನ ವಿದ್ಯಾರ್ಹತೆಯು ಗ್ರೂಪ್-ಡಿ ಹುದ್ದೆಯಿಂದ ಗ್ರೂಪ್-ಸಿ ಹುದ್ದೆಯ ಮುಂಬಡ್ತಿಯ ವಿದ್ಯಾರ್ಹತೆಗೆ ಪರಿಗಣಿಸಲಾಗುವುದೇ (ವಿವರ ಒದಗಿಸುವುದು). | ಇಲ್ಲ. ಗ್ರೂಪ್-ಡಿ ಹುದ್ದೆಯಿಂದ ಗ್ರೂಪ್-ಸಿ ಹುದ್ದೆಯ ಮುಂಬಡ್ತಿಗೆ ಪಿಯುಸಿ ಅಥವಾ ಅದರ ತತ್ಸಮಾನ ವಿದ್ಯಾರ್ಹತೆಗಳನ್ನು ನಿಗದಿಪಡಿಸಲಾಗಿರುತ್ತದೆ. Karnataka State Open University ಯವರ "Degree Bridge Course (Equivalent to 12th) Arts" ವಿದ್ಯಾರ್ಹತೆಯನ್ನು ಪಿಯುಸಿ ವಿದ್ಯಾರ್ಹತೆಗೆ ತತ್ಸಮಾನವೆಂದು ಪರಿಗಣಿಸಲಾಗುವುದಿಲ್ಲ. ಆದ್ದರಿಂದ, ಈ ವಿದ್ಯಾರ್ಹತೆಯನ್ನು ಪರಿಗಣಿಸಿ ಗ್ರೂಪ್-ಸಿ ಹುದ್ದೆಗೆ ಮುಂಬಡ್ತಿ ನೀಡಲು ಅವಕಾಶವಿರುವುದಿಲ್ಲ. |

ಸಂಖ್ಯೆ:ಡಿಪಿಎಆರ್ 56 ಎಟಿಎಸ್ 2021

(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ